**2 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**

**ಜೆ.ಎಂ.ಎಫ್.ಸಿ. ನ್ಯಾಯಾಲಯ, ಹುಬ್ಬಳ್ಳಿ.**

**ದಿಃ 24.09.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ**

ನಾನು ಈ ದಾವೆಯಲ್ಲಿ ವಾದಿಯಾಗಿದ್ದೇನೆ.

ನನ್ನ ಮುಖ್ಯವಿಚಾರಣೆಯ ಪ್ರಮಾಣಪತ್ರವನ್ನು ಈ ದಿನ ನ್ಯಾಯಾಲಯದ ಮುಂದೆ ಸಲ್ಲಿಸುತ್ತಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ. ಅದರಲ್ಲಿರುವ ಸಹಿ ನನ್ನದು.

ನಾನು ನನ್ನ ದಾವೆಗೆ ಸಂಬಂಧಿಸಿದಂತೆ ಸರ್ವೆ ನಂ.138/2 ಬಿ ಗಬ್ಬೂರ ಗ್ರಾಮದ 2022-23 ನೇ ಸಾಲಿನ ನಾಲ್ಕು ಪುಟದ ಪಹಣಿಯನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ.1 ಎಂದು, ಸರ್ವೆ ನಂ.138/2 ಬಿ ಗಬ್ಬೂರ ಗ್ರಾಮದ 1976-77 ರಿಂದ 2001-02 ರವರೆಗಿನ ಒಟ್ಟು ನಾಲ್ಕು ಪುಟದ ಪಹಣಿಯನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ.2 ಎಂದು, ಎಂ ಆರ್ ನಂ.2158 ರ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ.3 ಎಂದು, ದಿಃ 18/06/2006 ರಂದು ನೊಂದಾಯಿಸಲಾದ ಖರೀದಿ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ.4 ಎಂದು, ದಿಃ 17/08/2020 ರಂದು ನೊಂದಾಯಿಸಲಾದ ಹಕ್ಕುಬಿಟ್ಟುಕೊಟ್ಟ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ.5 ಎಂದು, ಬಸವನಗೌಡ ಇವರ ಮರಣ ಪ್ರಮಾಣಪತ್ರವನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ.6 ಎಂದು, ಫಕೀರವ್ವ ಇವರ ಮರಣ ಪ್ರಮಾಣಪತ್ರವನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ.7 ಎಂದು, ಬಸಪ್ಪ ಇವರ ಮರಣ ಪ್ರಮಾಣಪತ್ರವನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ.8 ಎಂದು,

ಯಲ್ಲಮ್ಮ ಇವರ ಮರಣ ಪ್ರಮಾಣಪತ್ರವನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ.9 ಎಂದು, ಜಿ ಎಸ್ ಲೀಲಾವತಿ ಇವರ ಮರಣ ಪ್ರಮಾಣಪತ್ರವನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ.10 ಎಂದು, ಹನಮಂತಪ್ಪ ಬಿ ಮುಗದ ಇವರ ಮರಣ ಪ್ರಮಾಣಪತ್ರವನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ.11 ಎಂದು, ಅಂಚೆ ರಶೀದಿಯನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ.12 ಎಂದು, ಅಂಚೆ ಸ್ವೀಕೃತಿಯನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ.13 ಎಂದು, ಸಾರ್ವಜನಿಕ ಮಾಹಿತಿ ಅಧಿಕಾರಿ ನೀಡಿರುವ ಪತ್ರವನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಪಿ.14 ಎಂದು ಗುರುತಿಸಲಾಯಿತು.

(**ಪಾಟೀ ಸವಾಲುಃ ಪ್ರತಿವಾದಿ ಪರ ವಕೀಲರನ್ನು ಕೂಗಿ ಕರೆಸಲಾಗಿ ಅವರು ನ್ಯಾಯಾಲಯದಲ್ಲಿ ಗೈರು ಹಾಜರಿರುವ ಕಾರಣ ಪಾಟೀ ಸವಾಲಿಗೆ ಸಮಯಾವಕಾಶ ನೀಡಿ ಮುಂದೂಡಲಾಯಿತು**).

(ನನ್ನ ಉಕ್ತಲೇಖದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೆ ಸರಿ ಇದೆ.

Sd/-

**2 ನೇ ಅಧಿಕ ಹಿ.ದಿ.ನ್ಯಾ.ಹುಬ್ಬಳ್ಳಿ.**